# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 933 (1048) |
| ವಿಧಾನ ಪರಿಷತ್ತಿನ ಸದಸ್ಯರು | : | ಶ್ರೀ ಐವನ್ ಡಿ'ಸೋಜಾ<br>(ವಿಧಾನಸಭಾ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ<br>ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 16.12.2025 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕರಾವಳಿ ಭಾಗದಲ್ಲಿ ಬೃಹತ್ ಕೈಗಾರಿಕೆ ಉತ್ತೇಜಿಸಲು ಇಲಾಖೆ ಕೈಗೊಂಡ ಕ್ರಮವೇನು; ರಾಜ್ಯದಲ್ಲಿ ಇನ್ವೆಷ್ಟರ್ ಮೀಟ್ ನಡೆಸಿದ ಮಾದರಿಯಲ್ಲಿ ಕರಾವಳಿ ಭಾಗದಲ್ಲಿ ಇನ್ವೆಷ್ಟರ್ ಮೀಟ್ ನಡೆಸಲು ಇಲಾಖೆ ಕ್ರಮ ಕೈಗೊಳ್ಳುವುದೇ; | ಕರಾವಳಿ ಭಾಗದಲ್ಲಿ ಬೃಹತ್ ಕೈಗಾರಿಕೆಗಳನ್ನು ಸ್ಥಾಪಿಸಲು ಉದ್ದಿಮೆದಾರರರಿಗೆ ಕರಾವಳಿ ಭಾಗದಲ್ಲಿ ಇರುವ ಅವಕಾಶಗಳ ಮಾಹಿತಿ ನೀಡಲಾಗುತ್ತಿದೆ.<br>ಕರಾವಳಿ ಭಾಗದಲ್ಲಿ ಹೂಡಿಕೆದಾರರ ಸಮಾವೇಶವನ್ನು ಜರುಗಿಸುವ ಬಗ್ಗೆ ಪ್ರಸ್ತಾವನೆ ಇರುವುದಿಲ್ಲ.<br>ಕೈಗಾರಿಕೆಗಳನ್ನು ಸ್ಥಾಪಿಸುವವರಿಗೆ ಸಹಾಯಧನ ಮತ್ತು ರಿಯಾಯಿತಿಗಳನ್ನು ನೀಡುವ ಬಗ್ಗೆ ಕೈಗಾರಿಕೆ ನೀತಿ 2025-30ನ್ನು ಹೊರತರಲಾಗಿದೆ. ಕೈಗಾರಿಕಾ ನೀತಿಯನ್ವಯ ಕರಾವಳಿ ಜಿಲ್ಲೆಯಲ್ಲಿ ಸ್ಥಾಪಿಸುವ ಹೊಸ ಕೈಗಾರಿಕೆಗಳಿಗೆ ರಿಯಾಯಿತಿ ಹಾಗೂ ಪ್ರೋತ್ಸಾಹಗಳನ್ನು ಒದಗಿಸಲಾಗುತ್ತದೆ. |
| ಆ | ಪ್ರವಾಸೋದ್ಯಮ ಇಲಾಖೆಯಿಂದ ಎಲ್ಲಾ ಮೂಲಭೂತ ಸೌಕರ್ಯ ಇನ್ನು ಕರಾವಳಿಯಲ್ಲಿ ಉದ್ದಿಮೆಗಳು ಜಾಸ್ತಿ ಬಂದಿದ್ದು, ಪ್ರವಾಸೋದ್ಯಮ ಇದಕ್ಕೆ ಸಹಕಾರಿಯಾಗುತ್ತದೆ ಎಂಬ ಬೇಡಿಕೆ ಇದ್ದು ಇಲಾಖೆ ಕ್ರಮ ಕೈಗೊಳ್ಳುವುದೇ? (ವಿವರ ನೀಡುವುದು.) | ಪ್ರವಾಸೋದ್ಯಮ ಆಧಾರಿತ ಯೋಜನೆಗಳು ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯಡಿಯಲ್ಲಿ ರಚಿಸಲ್ಪಟ್ಟಿರುವ SHLCC/SLSWCC ಮುಂದೆ ಅನುಮೋದನೆಗಾಗಿ ಅರ್ಜಿ ಸಲ್ಲಿಸಿದ್ದಲ್ಲಿ, ನಿಯಮಾನುಸಾರ ಪರಿಶೀಲಿಸಿ ತ್ವರಿತವಾಗಿ ಯೋಜನೆಗೆ ಅನುಮೋದನೆ ನೀಡಲಾಗುತ್ತದೆ. |

**ಸಿಐ 377 ಎಸ್‌ಪಿಐ 2025**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು